# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ 07 ಬ್ಯಾಟರಾಯನಪುರ ವಾರ್ಡ್ ಸಮಿತಿ ಸಭೆಯ ನಡವಳಿ.

ದಿನಾಂಕ 18.12.2021 ರಂದು ವಾರ್ಡ್ ಕಛೇರಿಯಲ್ಲಿ ಬೆಳ್ಳಿಗೆ 11.00 ಕ್ಕೆ ನೋಡಲ್ ಅಧಿಕಾರಿಗಳ ಸಮಕ್ಷಮದಲ್ಲಿ ಸಭೆಯನ್ನು ಹಮ್ಮಿಕೊಳ್ಳಲಾಯಿತು. ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ವಾರ್ಡ್ ನಂ.07, ಬ್ಯಾಟರಾಯನಪುರ ವಾರ್ಡ್‌ಗೆ ಮಾನ್ಯ ಆಯುಕ್ತರ ಆದೇಶದಂತೆ ನೋಡಲ್ ಅಧಿಕಾರಿಯಾಗಿ ನಿಯೋಜಿಸಲಾಗಿರುವ ಶ್ರೀ.ಪ್ರಕಾಶ್.ಜಿ ರವರು ಸಭೆಯಲ್ಲಿ ಹಾಜರಿದ್ದು, ಈ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಗಮನ ಹರಿಸಿ, ಕೈಗೊಂಡ ಕ್ರಮದ ಬಗ್ಗೆ ಚರ್ಚಿಸಲಾಯಿತು.

1. ಘನತ್ಯಾಜ್ಯ ನಿರ್ವಹಣೆ:
    1. ಜಕ್ಕೂರು ಮುಖ್ಯ ರಸ್ತೆಯ ಬದಿಯಲ್ಲಿ ಘಣತ್ಯಾಜ್ಯ ನಿರ್ವಹಣೆ ಬಗ್ಗೆ ಕ್ರಮಕೈಗೊಳ್ಳಬೇಕೆಂದು ಮನವಿ ಮಾಡಿದರು.
    2. ವಾರ್ಡ್ 07 ರಲ್ಲಿನ ವಾಣಿಜ್ಯ ಮಳಿಗೆಗಳು ಕಸವನ್ನು ನೀಡುತ್ತಿರುವ ಬಗ್ಗೆ ಕ್ರಮಕೈಗೊಳಿಸಬೇಕೆಂದು ಮನವಿ ಮಾಡಿದರು.
    3. ನೇತಾಜಿನಗರ ಬಡಾವಣೆಯಲ್ಲಿ ಓಣ ತ್ಯಾಜ್ಯಾ ಸಂಗ್ರಣ ಸಮರ್ಪಕವಾಗಿ ನಿರ್ವಹಿಸುತ್ತಿರುವುದಿಲ್ಲ ಎಂದು ಮಾಹಿತಿ ನೀಡಿರುತ್ತಾರೆ.
2. ಆರೋಗ್ಯ ಇಲಾಖೆ:
    1. ಅಮೃತಹಳ್ಳಿ ಕೆರೆಯ ಆವರಣದಲ್ಲಿ ಕಲುಷಿತ ನೀರು ನಿಂತಿರುವ ಕಾರಣ ಸೊಳ್ಳೆಗಳ ಕಾಟ ಹೆಚ್ಚಾಗಿರುವುದರಿಂದ, ಓಷದಿಯನ್ನು ಸಿಂಪಡಿಸಿಕೊಡಬೇಕೆಂದು ಮುನಿಸ್ವಾಮಿಗೌಡ ಬಡಾವಣೆಯ ನಿವಾಸಿಗಳು ಮನವಿ ಮಾಡಿರುತ್ತಾರೆ. ಸೂಕ್ತ ಕ್ರಮ ಕೈಗೊಳ್ಳುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿದರು.
    2. ಕೆಂಪಾಪುರ ಜೈನ್ ಹೆರಿಟೇಜ್ ಶಾಲೆಯ ಹಿಂಭಾಗದಲ್ಲಿ ಇರುವ ಸ್ಲಮ್ ಪ್ರದೇಶಗಳಲ್ಲಿ ಕೋವಿಡ್ ವ್ಯಾಕ್ಸಿನ್ ಆಕಿಸಿಕೊಳ್ಳದೆ ವಿರುವುದು ತಿಳಿದು ಬಂದಿದ್ದು, ಇದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿರುತ್ತಾರೆ.
3. ಕಾಮಗಾರಿ ವಿಭಾಗ:
    1. ಎಲ್.ಎನ್.ಟಿ ರಸ್ತೆಯ ಬಗ್ಗೆ ಹಿಂದಿನ ಸಭೆಯಲ್ಲಿ ನೀಡಲಾದ ಸಾರ್ವಜನಿಕರ ದೂರುಗಳ ಬಗ್ಗೆ ಕ್ರಮವಹಿಸಿದ ಬಗ್ಗೆ ತೃಪ್ತಿ ವ್ಯಕ್ತಪಡಿಸಿರುತ್ತಾರೆ. ಅಲ್ಲದೆ ಉಳಿದ ಕೆಲಸಗಳ ಬಗ್ಗೆ ಕ್ರಮವಹಿಸಬೇಕೆಂದು ಮನವಿ ಮಾಡಿದರು.
    2. ಶ್ರೀರಾಮ ವಿದ್ಯಾಲಯ ರಸ್ತೆ ಅಭಿವೃದ್ಧಿ ಕಾಮಗಾರಿ ಮತ್ತು ಜಕ್ಕೂರು ಮುಖ್ಯ ರಸ್ತೆಯ ಪಾದಚಾರಿ ಮಾರ್ಗ ದುರಸ್ತಿ ಕೆಲಸಗಳನ್ನು ನಿರ್ವಹಿಸಕೊಡಬೇಕೆಂದು ಮನವಿ ಮಾಡಿರುತ್ತಾರೆ.

ಸದರಿ ರಸ್ತೆಗಳು ರಸ್ತೆ ಮತ್ತು ಮೂಲಕ ಭೂತ ಸೌಕರ್ಯ ವಿಭಾಗಕ್ಕೆ ಸೇರಿದ್ದು, ಸೂಕ್ತ ಕರಮ ಕೈಗೊಳ್ಳಲು ಸಂಬಂದಪಟ್ಟ ಅಧಿಕಾರಿಗಳಿಗೆ ಸೂಚಿಸಬೇಕೆಂದು ಮನವಿ ಮಾಡಿರುತ್ತಾರೆ.

4. ವಿದ್ಯುತ್ (ಬೀದಿ ದೀಪಗಳ ನಿರ್ವಹಣೆ) ವಿಭಾಗ:
   1. ಬೀದಿ ದೀಪಗಳ ನಿರ್ವಹಣೆ ಅತ್ಯಂತ ಪ್ರಮುಖವಾದ ಕೆಲಸವಾಗಿದ್ದು, ಬೀದಿ ದೀಪಗಳನ್ನು ಅದಷ್ಟು ಸುಸ್ಥಿತಿಯಲ್ಲಿಡುವುದು. ಪಂಪಾ ಬಡಾವಣೇ ಮತ್ತು ಬ್ಯಾಟರಾಯನಪುರ ಅಯ್ಯಪ್ಪ ದೇವಸ್ಥಾನದ ರಸ್ತೆಯಲ್ಲಿ ಬೀದಿ ದೀಪಗಳ ಕೊರತೆವಿರುವುದಾಗಿ ತಿಳಿಸಿರುತ್ತಾರೆ.
   2. ವಾರ್ಡ್ ವ್ಯಾಪ್ತಿಯಲ್ಲಿ ಆಳವಡಿಸಲಾಗಿರುವ ಎಲ್.ಇ.ಡಿ ವಿದ್ಯುತ್ ದೀಪಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವುದರ ಬಗ್ಗೆ ಕ್ರಮವಹಿಸುವುದು.
   3. ವಾರ್ಡ್ ಕಛೇರಿಯ ಆವರಣದಲ್ಲಿ ಒಂದು ವಿದ್ಯುತ್ ದೀಪವನ್ನು ಅಳವಡಿಸಬೇಕೆಂದು ತಿಳಿಸಲಾಯಿತು.

5. ಕಂದಾಯ ವಿಭಾಗ:
   1. ವಾರ್ಡ್ ವ್ಯಾಪ್ತಿಯಲ್ಲಿನ ಕಂದಾಯ ಪಾವತಿಯನ್ನು ಬಾಕಿ ಉಳಿಸಿಕೊಂಡಿರುವ ಪ್ರಮುಖ ಸಂಸ್ಥೆಗಳನ್ನು ಗುರುತಿಸಿ ಇವುರುಗಳಿಂದ ಕಂದಾಯವನ್ನು ವಸೂಲಿ ಮಾಡಲು ಸೂಕ್ತ ಕ್ರಮಕೈಗೊಳ್ಳಲುವುದು.

6. ಜಲಮಂಡಳಿ ವಿಭಾಗ:
   1. ಬ್ಯಾಟರಾಯನಪುರದಲ್ಲಿ ಸ್ಯಾನಿಟರಿ ಚೇಂಬರ್‌ಗಳು ಹೆಚ್ಚಾಗಿ ಮಣ್ಣಿನಿಂದ ತುಂಬಿದ್ದು, ಇವುಗಳನ್ನು ಸುವುಗೊಳಿಸಿಕೊಡಬೇಕೆಂದು ಮನವಿ ಮಾಡಿದರು. ಅದರಂತೆ ರಾಜೇಶ್ ಬಿಡ್ಲುಎಸ್‌ಎಸ್‌ಬಿ ವಿಭಾಗದವರು ಕ್ರಮ ಕೈಗೊಳ್ಳುವುದಾಗಿ ತಿಳಿಸಿರುತ್ತಾರೆ.
   2. ಬ್ಯಾಟರಾಯನಪುರ ಗ್ರಾಮಠಾಣದ ಭಾಗದಲ್ಲಿ ಹೊಸದಾಗಿ ಒಳಚರಂಡಿ ಸಂಪರ್ಕವನ್ನು ಕಲ್ಪಿಸಲು ಮನವಿ ಮಾಡಿರುತ್ತಾರೆ.
   3. ಕಾಫಿ ಬೋರ್ಡ್ ಬಡಾವಣೆಯಲ್ಲಿ ಕುಡಿಯುವ ನೀರು ಸರಬರಾಜು ಇಲ್ಲದೆ ವಿರುವ ಬಗ್ಗೆ ಕ್ರಮವಹಿಸಲು ಮನವಿ ಮಾಡಿರುತ್ತಾರೆ.

Ashwini. M.D.
ಕಾರ್ಯದರ್ಶಿ
ವಾರ್ಡ್ 07